ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಆ/90/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ:10-10-2023

**ಸುತ್ತೋಲೆ**

ವಿಷಯ: 2023-24ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕಾಲೇಜುಗಳಿಗೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:06.10.2023.

* * * * * * *

2023-24ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗಿರುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ದಿನಾಂಕ:22.09.2023 ರಿಂದ ದಿನಾಂಕ:05.10.2023 ರವರೆಗೆ ನಡೆದ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಿದ ಅಭ್ಯರ್ಥಿಗಳು ಅವರು ಆಯ್ಕೆ ಮಾಡಿಕೊಂಡ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು 03 ಕೆಲಸದ ದಿನಗಳ ಅವಕಾಶ ನೀಡಲಾಗಿತ್ತು. ಕೆಲವು ಅತಿಥಿ ಉಪನ್ಯಾಸಕರು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ಹೆಚ್ಚುವರಿ ಕಾಲಾವಕಾಶ ಕೋರಿರುವ ಹಿನ್ನೆಲೆಯಲ್ಲಿ ದಿನಾಂಕ:11.10.2023 ರವರೆಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ. ದಿನಾಂಕ:11.10.2023 ರ ಸಾಯಂಕಾಲ 5:00 p.m. ಒಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದ ಅಭ್ಯರ್ಥಿಗಳ ಮಾಹಿತಿಯನ್ನು EMIS ನಲ್ಲಿ Not Reported ಎಂದು ನಮೂದಿಸಿ Upload ಮಾಡಲು ಪ್ರಾಂಶುಪಾಲರಿಗೆ ಸೂಚಿಸಲಾಗಿದೆ.

ಮುಂದುವರೆದು, ಪ್ರಥಮ ಸುತ್ತಿನ ಕೌನ್ಸಿಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡ ಕೆಲವು ಅಭ್ಯರ್ಥಿಗಳು ಸ್ನಾತಕೋತ್ತರ ಪದವಿಯ ಶೇಕಡವಾರು ಅಂಕಗಳು ಮತ್ತು ಸೇವಾ ಅವಧಿಯ ಹಾಗೂ ಇತರೆ ಮಾಹಿತಿಗಳನ್ನು ಆನ್‌ಲೈನ್ ಅರ್ಜಿಯಲ್ಲಿ ತಪ್ಪಾಗಿ ನಮೂದಿಸಿದ್ದು, ಇದರಿಂದಾಗಿ ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ಸಾಧ್ಯವಾಗದೇ ಇರುವುದನ್ನು ಮನವಿ ಮೂಲಕ ಸಲ್ಲಿಸಿರುತ್ತಾರೆ. ಈ ಬಗ್ಗೆ ಪರಿಶೀಲಿಸಲಾಗಿ, ಪ್ರಥಮ ಸುತ್ತಿನ ಕೌನ್ಸಿಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ಸಾಧ್ಯವಾಗದಿರುವ ಅಭ್ಯರ್ಥಿಗಳಿಗೆ ಹಾಗೂ ಇನ್ನೂ ಕೌನ್ಸಿಲಿಂಗ್ ಪ್ರಕ್ರಿಯೆಗೆ ಒಳಪಡದಿರುವ ಅಭ್ಯರ್ಥಿಗಳಿಗೆ ದಿನಾಂಕ:12.10.2023 ರಂದು ಒಂದು ದಿನ ಮಾತ್ರ ಆನ್‌ಲೈನ್ ಅರ್ಜಿಯಲ್ಲಿ ತಿದ್ದುಪಡಿ (Edit) ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈ ರೀತಿ ತಿದ್ದುಪಡಿ (Edit) ಮಾಡಿಕೊಂಡ ಅಭ್ಯರ್ಥಿಗಳಿಗೆ ಪುನಃ ಆನ್‌ಲೈನ್ ಕೌನ್ಸಿಲಿಂಗ್ ಮೂಲಕವೇ ಸ್ಥಳ ನಿಯುಕ್ತಿಗೊಳಿಸಲಾಗುವುದು. (ಕೌನ್ಸಿಲಿಂಗ್ ದಿನಾಂಕವನ್ನು ನಂತರ ತಿಳಿಸಲಾಗುವುದು)

ಆಯುಕ್ತರು
ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ: ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.